**Akashvani : Bangalore**
**Regional Bulletin In Kannada**
**08.08.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**08.08.2025 / 18.40 hrs**
**<><*<><>*><>**

**ಮುಖ್ಯಾಂಶಗಳು**

**೧. ಬೆಂಗಳೂರಿನ ಮಹಾದೇವ್‌ಪುರ ವಿಧಾನಸಭಾ ಕ್ಷೇತ್ರ ಒಂದರಲ್ಲೇ ೧ ಲಕ್ಷ ೨೫೦ ಮತಚೌರ್ಯ - ರಾಹುಲ್ ಗಾಂಧಿ ಆರೋಪ**

**೨. ನಾಡಿನಾದ್ಯಂತ ಇಂದು ಶ್ರದ್ಧಾ-ಭಕ್ತಿಯಿಂದ ವರಮಹಾಲಕ್ಷ್ಮೀ ಹಬ್ಬ ಆಚರಣೆ**

**೩. ರಾಯಚೂರಿನಲ್ಲಿ ಇಂದಿನಿಂದ ಅಗ್ನಿವೀರ್ ಸೇನಾ ನೇಮಕಾತಿ ಆರಂಭ**

**೪. ಚಿಕ್ಕಮಗಳೂರು ಜಿಲ್ಲೆಯಲ್ಲಿ ವಿಶಿಷ್ಟವಾಗಿ ಆಚರಿಸುವ ಹಗರಣ ಹಬ್ಬಕ್ಕೆ ಚಾಲನೆ**

**<><*<><>*><>**

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತೊಮ್ಮೆ ಚುನಾವಣಾ ಆಯೋಗದ ವಿರುದ್ಧ ಮತಗಳ್ಳತನ ಆರೋಪ ಮಾಡಿದ್ದಾರೆ. ಬೆಂಗಳೂರಿನ ಸ್ವತಂತ್ರ ಉದ್ಯಾನದಲ್ಲಿ ಕಾಂಗ್ರೆಸ್ ಪಕ್ಷದಿಂದ ಇಂದು ನಡೆದ 'ಮತದಾರರ ಅಧಿಕಾರ ರ‍್ಯಾಲಿ' ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಚುನಾವಣಾ ಆಯೋಗ ಕಳೆದ ೧೦ ವರ್ಷಗಳ ಮತದಾರರ ಪಟ್ಟಿಯ ಡಿಜಿಟಲ್ ರೂಪಾಂತರ ಮತ್ತು ವಿಡಿಯೋಗ್ರಾಫಿ ಅನ್ನು ತಕ್ಷಣ ತಮ್ಮ ಪಕ್ಷಕ್ಕೆ ಸಲ್ಲಿಸಬೇಕು ಎಂದು ಆಗ್ರಹಿಸಿದರು. ಮತದಾರರ ಪಟ್ಟಿಯಲ್ಲಿ ಮೋಸ ನಡೆದಿದೆ ಎಂದು ಆರೋಪಿಸಿದ ಅವರು, ಇದರಿಂದ ಬಿಜೆಪಿಗೆ ಚುನಾವಣೆಯಲ್ಲಿ ಪ್ರಯೋಜನವಾಗಿದೆ. ಇದಕ್ಕೆ ಕಾರಣರಾದವರ ವಿರುದ್ಧ ವಿಪಕ್ಷಗಳು ಕಠಿಣ ಕ್ರಮ ಜರುಗಿಸಲಿವೆ ಎಂದು ಅವರು ಎಚ್ಚರಿಸಿದರು. ಬೆಂಗಳೂರು ಕೇಂದ್ರ ಲೋಕಾಸಭಾ ಕ್ಷೇತ್ರದ ಮಹಾದೇವಪುರ ವಿಧಾನಸಭಾ ಕ್ಷೇತ್ರ ಒಂದರಲ್ಲೇ ೧ ಲಕ್ಷ ೨೫೦ ಮತಚೌರ್ಯ ಜರುಗಿದೆ ಎಂದು ಆರೋಪಿಸಿದ ಅವರು, ಇದಕ್ಕೆ ಕಾರಣಕರ್ತರಾದ ಅಧಿಕಾರಿಗಳ ವಿರುದ್ಧ ಕರ್ನಾಟಕ ಸರ್ಕಾರ ತನಿಖೆ ಆರಂಭಿಸಿ, ಕಠಿಣ ಕ್ರಮ ಜರುಗಿಸಬೇಕು ಎಂದು ಅವರು ಆಗ್ರಹಿಸಿದರು. ಕಳೆದ ಲೋಕಸಭೆ ಚುನಾವಣೆ ನಂತರ ಮಹಾರಾಷ್ಟ್ರದಲ್ಲಿ ವಿಧಾನಸಭೆ ಚುನಾವಣೆ ನಡೆಯಿತು. ಆದರೆ ಆ ವಿಧಾನಸಭೆ ಚುನಾವಣೆಯಲ್ಲಿ ಹೆಚ್ಚುವರಿ ಒಂದು ಕೋಟಿ ಮತದಾರರು ತಮ್ಮ ಮತ ಚಲಾಯಿಸಿದರು ಎಂದು ಆರೋಪಿಸಿದ ಅವರು, ಚುನಾವಣೆ ಪ್ರಕ್ರಿಯೆಯಲ್ಲಿ ಎಲ್ಲವೂ ಸರಿಯಿಲ್ಲ ಎಂಬ ಅನುಮಾನ ನಮಗೆ ಆಗ ಶುರುವಾಯಿತು ಎಂದು ರಾಹುಲ್ ಗಾಂಧಿ ಹೇಳಿದರು.

**ಧ್ವನಿ: ರಾಹುಲ್ ಗಾಂಧಿ (೫೦ ಸೆಕೆಂಡ್‌ಗಳು)**

ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿ ಆಗಿದೆ ಎಂದು ಆರೋಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮತಗಳ್ಳತನದ ವಿರುದ್ಧ ಕರ್ನಾಟಕ ರಾಜ್ಯದಿಂದ ಆರಂಭವಾಗಿರುವ ಪ್ರತಿಭಟನಾ ಅಭಿಯಾನ, ಇಡೀ ದೇಶಾದ್ಯಂತ ವ್ಯಾಪಿಸಲಿದೆ ಎಂದು ಹೇಳಿದ್ದಾರೆ. ಪ್ರತಿಭಟನಾ ರ‍್ಯಾಲಿ ಉದ್ದೇಶಿಸಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿದರು. ಈ ವೇಳೆ ಕಾಂಗ್ರೆಸ್‌ನ ಅನೇಕ ನಾಯಕರು ಉಪಸ್ಥಿತರಿದ್ದರು. ಇನ್ನೊಂದೆಡೆ, ರಾಹುಲ್ ಗಾಂಧಿ ಅವರ ಆರೋಪಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾದದ್ದು ಎಂದು ಹೇಳಿದ್ದಾರೆ.

<><*<><>*><>

ರಾಜ್ಯದಲ್ಲಿ ರೈತರು ಸಂಕಷ್ಟಕ್ಕೀಡಾಗಿದ್ದಾರೆ. ಹಾಸನ ಜಿಲ್ಲೆಯಲ್ಲಿ ಕಾಫಿ, ಏಲಕ್ಕಿ, ತೆಂಗು, ಅಡಿಕೆ, ಭತ್ತ, ರಾಗಿ ಸೇರಿದಂತೆ ಹಲವು ಬೆಳೆಗಳನ್ನು ಬೆಳೆದಿರುವ ರೈತರು, ವಿವಿಧ ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಆದರೆ ರಾಜ್ಯ ಸರ್ಕಾರ ಅವುಗಳನ್ನು ನಿವಾರಿಸುವಲ್ಲಿ ವಿಫಲವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಆರೋಪಿಸಿದ್ದಾರೆ. ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅತಿವೃಷ್ಟಿಯಿಂದ ರೈತರು ಬೆಳೆ ಕಳೆದುಕೊಂಡು ಕಂಗಾಲಾಗಿದ್ದರೆ, ಇನ್ನೊಂದೆಡೆ, ರಸಗೊಬ್ಬರದ ಕೊರತೆಯಿಂದ ರೈತರು ಬಳಲುತ್ತಿದ್ದಾರೆ. ಇಷ್ಟೆಲ್ಲ ಸಮಸ್ಯೆಗಳಿದ್ದರೂ ಈವರೆಗೆ ಜಿಲ್ಲೆಗೆ ಕೃಷಿ ಸಚಿವರು ಭೇಟಿ ನೀಡುವ ಕೆಲಸ ಮಾಡಿಲ್ಲ ಎಂದು ದೂರಿದರು. ಸರ್ಕಾರಕ್ಕೆ ಕೇವಲ ಗ್ಯಾರಂಟಿ ಒಂದೇ ಅಜೆಂಡ ಆಗಬಾರದು. ಗ್ರಾಮೀಣ ಭಾಗದ ಜನಸಾಮಾನ್ಯರು, ರೈತರು ಹಾಗೂ ಎಲ್ಲಾ ವರ್ಗದ ಜನರ ಸರ್ವತೋಮುಖ ಅಭಿವೃದ್ಧಿ ಬಗ್ಗೆ ಸರ್ಕಾರ ಯೋಚಿಸಬೇಕಿದೆ ಎಂದರು.

<><*<><>*><>

ಇಂದು ನಾಡಿನಾದ್ಯಂತ ಸಂಭ್ರಮದಿಂದ ವರ ಮಹಾಲಕ್ಷ್ಮಿ ಹಬ್ಬವನ್ನು ಆಚರಿಸಲಾಗುತ್ತಿದೆ. ಮಹಿಳೆಯರು ಮನೆಗಳನ್ನು ತಳಿರು ತೋರಣಗಳಿಂದ ಅಲಂಕರಿಸಿ, ವಿವಿಧ ಅಲಂಕಾರಗಳಿಂದ ಲಕ್ಷ್ಮಿ ದೇವಿಯನ್ನು ಪೂಜಿಸುತ್ತಿದ್ದಾರೆ. ವಿಜಯಪುರ ಜಿಲ್ಲಾದ್ಯಂತ ವರ ಮಹಾಲಕ್ಷ್ಮಿ ಹಬ್ಬವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸುತ್ತಿದ್ದಾರೆ. ನಗರದ ಹೃದಯ ಭಾಗವಾದ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ಹಬ್ಬದ ವಾತಾವರಣ ಕಳೆಕಟ್ಟಿದೆ. ಹುಬ್ಬಳ್ಳಿ-ಧಾರವಾಡದಲ್ಲಿ ಇಂದು ವರ ಮಹಾಲಕ್ಷ್ಮಿ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಯಿತು. ದೇಗುಲಗಳಲ್ಲಿ ವಿಶೇ? ಪೂಜೆ ನಡೆದರೆ, ಮನೆಗಳಲ್ಲಿ ಕಳಶದಲ್ಲಿ ಲಕ್ಷ್ಮಿದೇವಿ ಪ್ರತಿ?ಪಿಸಿ, ಪ್ರಾರ್ಥಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ವರಮಹಾಲಕ್ಷ್ಮೀ ಹಬ್ಬವನ್ನು ಶ್ರದ್ಧಾ-ಭಕ್ತಿ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಹೂವು ಹಣ್ಣು, ಅಗತ್ಯ ವಸ್ತುಗಳ ಬೆಲೆ ಏರಿಕೆ ನಡುವೆಯೂ ಹಬ್ಬದ ಸಂಭ್ರಮ ಕಾಣುತ್ತಿದೆ. ದೇವಾಲಯಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ. ಈ ಹಬ್ಬದಂದು ಮಹಾಲಕ್ಷ್ಮಿಯ ಮೂರ್ತಿ ಹಾಗೂ ಕಳಶ ಸ್ಥಾಪಿಸಿ, ತಳಿರು ತೋರಣ, ಹೂಗಳಿಂದ ಸಿಂಗರಿಸಿದ ಮಹಾಲಕ್ಷ್ಮಿ ಪ್ರತಿಮೆಗೆ ವಿಶೇಷ ಅಲಂಕಾರ ಮಾಡಿ, ನೈವೇದ್ಯಗಳನ್ನು ಅರ್ಪಿಸಿ, ಪೂಜೆ ನೆರವೇರಿಸಿ, ಸುಮಂಗಲಿಯರಿಗೆ ಅರಿಶಿನ-ಕುಂಕುಮ ನೀಡುವ ಆಚರಣೆ ಸಾಮಾನ್ಯವಾಗಿದೆ.

<><*<><>*><>

ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಮೈದಾನದಲ್ಲಿ ಇಂದು ಅಗ್ನಿವೀರ್ ಸೇನಾ ನೇಮಕಾತಿ ಭರ್ತಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ಇದೇ ೨೪ ರವರೆಗೆ ಸೇನಾ ನೇಮಕಾತಿ ನಡೆಯಲಿದೆ. ಮೊದಲ ದಿನ ಕೊಪ್ಪಳ ಜಿಲ್ಲೆಯಿಂದ ಒಟ್ಟು ೫೮೭ ಅಭ್ಯರ್ಥಿಗಳು ರ್‍ಯಾಲಿಗೆ ವರದಿ ಮಾಡಿಕೊಂಡರು. ಶಾರೀರಿಕ ಪರೀಕ್ಷೆ, ಓಟ, ದೈಹಿಕ ಸಾಮರ್ಥ್ಯ ಪರೀಕ್ಷೆ ಸೇರಿದಂತೆ ಕಠಿಣ ಪರೀಕ್ಷಾ ಹಂತಗಳನ್ನು ಯಶಸ್ವಿಯಾಗಿ ಪೂರೈಸಿ, ೫೧೮ ಯುವಕರು ಮುಂದಿನ ಹಂತಕ್ಕೆ ಆಯ್ಕೆಯಾದರು. ಮುಂದಿನ ಹಂತಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಅಗತ್ಯ ಮಾರ್ಗದರ್ಶನ ನೀಡಲಾಗಿದ್ದು, ಅವರು ಶೀಘ್ರದಲ್ಲೇ ತರಬೇತಿಗೆ ಹಾಜರಾಗಲಿದ್ದಾರೆ ಎಂದು ಸೇನಾ ಅಧಿಕಾರಿಗಳು ತಿಳಿಸಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಹಿರೇಗೌಜ ಗ್ರಾಮದಲ್ಲಿ ೭ ಹಳ್ಳಿಗಳ ಜನರು ಒಟ್ಟಾಗಿ ಸೇರಿ ವಿಶಿಷ್ಟವಾಗಿ ಆಚರಿಸಲಾಗುವ ಹಗರಣ ಹಬ್ಬಕ್ಕೆ ಚಾಲನೆ ನೀಡಲಾಗಿದೆ. ಒಟ್ಟು ೮ ದಿನಗಳು ಈ ಹಬ್ಬ ಆಚರಿಸಲಾಗುತ್ತದೆ. ಗ್ರಾಮದ ಬಳಲಿಕವ್ವ ದೇವಿಯ ಆರಾಧನೆಯ ಹಬ್ಬ ಇದಾಗಿದ್ದು, ಹಿರೇಗೌಜ, ಚಿಕ್ಕಗೌಜ, ಸಾದರಹಳ್ಳಿ, ಕುರಿಚಿಕ್ಕನಹಳ್ಳಿ, ಕೆಂಗೇನಹಳ್ಳಿ, ಕರಿಸಿದ್ದರಹಳ್ಳಿ, ಕಾರೇಹಳ್ಳಿಗಳ ಜನರು ಒಟ್ಟಾಗಿ ಸಾಮರಸ್ಯದಿಂದ ಈ ಜಾನಪದ ಹಬ್ಬವನ್ನು ಆಚರಿಸುತ್ತಿದ್ದಾರೆ. ನಾನಾ ಕಾರಣಗಳಿಂದ ಕಳೆದ ೯ ವರ್ಷಗಳಿಂದ ನಿಂತು ಹೋಗಿದ್ದ ಆಚರಣೆಗೆ ಮತ್ತೆ ಈ ವರ್ಷದಿಂದ ಚಾಲನೆ ನೀಡಲಾಗಿದೆ. ದೇವಿಗೆ ನಿತ್ಯ ವಿಶೇಷ ಪೂಜೆ, ಕೆಂಡಹಾಯುವುದು ಸೇರಿದಂತೆ ಜನರು ವಿವಿಧ ವೇಷ ಧರಿಸಿ ಗ್ರಾಮಕ್ಕೆ ಆಗಮಿಸಿ, ಈ ಹಬ್ಬದಲ್ಲಿ ಪಾಲ್ಗೊಳ್ಳುತ್ತಾರೆ.

**<><*<><>*><>**

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿ ಯೂರಿಯಾ ಸೇರಿದಂತೆ ಯಾವುದೇ ರಸಗೊಬ್ಬರದ ಕೊರತೆ ಇಲ್ಲ. ಗೊಬ್ಬರದ ಕೃತಕ ಅಭಾವ ಸೃಷ್ಟಿಸಿದರೆ, ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಹಸೀಲ್ದಾರ್ ಜಿ.ಆದರ್ಶ ರಸಗೊಬ್ಬರ ಮಾರಾಟಗಾರರಿಗೆ ಎಚ್ಚರಿಕೆ ನೀಡಿದ್ದಾರೆ.  ನಾಗಮಂಗಲ ಪಟ್ಟಣದ ಶಿಕ್ಷಕರ ಭವನದಲ್ಲಿ ಕೃಷಿ ಇಲಾಖೆಯಿಂದ ರಸಗೊಬ್ಬರಗಳ ಸಮರ್ಪಕ ನಿರ್ವಹಣೆ ಹಾಗೂ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳ ಬಳಕೆ ತಡೆಗಟ್ಟುವ ಕುರಿತು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಾಗಮಂಗಲ ತಾಲೂಕಿನಾದ್ಯಂತ ಉತ್ತಮ ಮಳೆಯಾಗುತ್ತಿದೆ. ರೈತರು ಕೃಷಿ ಚಟುವಟಿಕೆಯನ್ನು ಆರಂಭಿಸಿದ್ದಾರೆ. ಹಾಗಾಗಿ ಮಾರಾಟಗಾರರು ರೈತರಿಗೆ ತೊಂದರೆಯಾಗದಂತೆ ರಸಗೊಬ್ಬರಗಳ ಸಮರ್ಪಕ ನಿರ್ವಹಣೆ ಮಾಡಬೇಕು ಎಂದು ಸೂಚಿಸಿದರು.

**<><*<><>*><>**

ರಾಯಚೂರು ನಗರದ ಬಸವೇಶ್ವರ ಕಾಲೊನಿಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಮಧ್ಯಸ್ಥಗಾರಿಕೆ ಅಭಿಯಾನಕ್ಕೆ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹೆಚ್.ಎ.ಸಾತ್ವಿಕ್ ಚಾಲನೆ ನೀಡಿದ್ದಾರೆ. ಈ ವೇಳೆ ಮಾತನಾಡಿದ ಅವರು, ಈ ಮಧ್ಯಸ್ಥಗಾರಿಕೆ ಅಭಿಯಾನದಲ್ಲಿ ಎಲ್ಲಾ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸುವಂತಹ ಮಹತ್ವದ ಇಚ್ಛೆಯನ್ನು ಮತ್ತು ಗುರಿ ಇಟ್ಟುಕೊಳ್ಳಲಾಗಿದೆ. ಈ ಅಭಿಯಾನದಲ್ಲಿ ನುರಿತ ವಕೀಲರು ಮತ್ತು ನ್ಯಾಯಾಧೀಶರು ಭಾಗವಹಿಸಿ, ಕಕ್ಷಿದಾರರಿಗೆ ಸಂಧಾನಕಾರರಾಗಿ ಸಲಹೆ ಸೂಚನೆಗಳನ್ನು ನೀಡಲಿದ್ದಾರೆ ಎಂದರು.  ಸಂಧಾನ ಪ್ರಕ್ರಿಯೆಗೆ ಯಾವುದೇ ಕಕ್ಷಿದಾರರು ಹಣ ಖರ್ಚು ಮಾಡುವಂತಿಲ್ಲ. ಈ ಅಭಿಯಾನಕ್ಕೆ ಅಗತ್ಯವಿರುವ ಎಲ್ಲಾ ಖರ್ಚು-ವೆಚ್ಚಗಳನ್ನು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದಲೇ ಭರಿಸಲಾಗುತ್ತದೆ ಎಂದು ಅವರು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ  <>*><>**